# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 717
ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ ಎಸ್.
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 21.02.2024
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರ್ಕಾರಿ ಜಮೀನನ್ನು ಕಬಳಿಸಿರುವ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ; (ಪ್ರಕರಣವಾರು ಭೂ ಕಬಳಿಕೆದಾರರ ಸಂಪೂರ್ಣ ವಿವರ ನೀಡುವುದು) | ರಾಜ್ಯದಲ್ಲಿ ಸರ್ಕಾರಿ ಜಮೀನನ್ನು ಕಬಳಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಒಟ್ಟು 22,080. |
| ಆ) | ಈ ಭೂ ಕಬಳಿಕೆಗೆ ಸಹಕರಿಸಿದ ಆರೋಪದ ಮೇಲೆ ಎಷ್ಟು ಜನ ಸರ್ಕಾರಿ ನೌಕರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; ಸದರಿ ನೌಕರರನ್ನು ವಜಾ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ವಿವರ ನೀಡುವುದು) | ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಸರ್ಕಾರಿ ನೌಕರರ ವಿರುದ್ಧ ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ.<br><br>ಮುಂದುವರೆದು, ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲಾಗಿರುವ ಅಧಿಕಾರಿಗಳು ಹಾಗೂ ಭೂ ಕಬಳಿಕೆ ದುಷ್ಪೇರಣೆ ನೀಡುವ/ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾದ ಅಧಿಕಾರಿ/ಸಿಬ್ಬಂದಿಗಳ ಕಾನೂನು/ಶಿಸ್ತು ಕ್ರಮ ಜರುಗಿಸುವ ಕುರಿತು ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 20 ಎಲ್‌ಜಿಪಿ 2020, ದಿ: 20.01.2020ರ ಸುತ್ತೋಲೆಯಲ್ಲಿ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿದೆ. |
| ಇ) | ಈ ಭೂ ಕಬಳಿಕೆ ಪ್ರಕರಣದಲ್ಲಿ ಭಾಗಿಯಾಗಿರುವ ಹಿರಿಯ ಅಧಿಕಾರಿಗಳ ವಿವರ ಒದಗಿಸುವುದು; | |
| ಈ) | ಈ ಭೂ ಕಬಳಿಕೆ ಆಗಿರುವ ಜಮೀನಿನ ಪೈಕಿ ಎಷ್ಟು ಜಮೀನನ್ನು ಒತ್ತುವರಿ/ ತೆರವುಗೊಳಿಸಿ ಸಾಧೀನಕ್ಕೆ ಪಡೆಯಲಾಗಿದೆ? (ಜಿಲ್ಲಾವಾರು ವಿವರ ನೀಡುವುದು) | ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದ ಆದೇಶದಂತೆ ಒಟ್ಟು 2095.21 ಎಕರೆ/ಗುಂಟೆ ಜಮೀನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ. |

ಸಂಖ್ಯೆ: ಆರ್‌ಡಿ 30 ಎಲ್‌ಜಿಕ್ಯೂ 2024

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು